ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 13-01-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾಗೋಷ್ಠಿ:<br><br>ಶ್ರೀ ಎಸ್.ಬಿ. ಬೊಮ್ಮನಹಳ್ಳಿ,<br>ನಿರ್ದೇಶಕರು,<br>ಲಾಲ್‌ಬಾಗ್, ಬೆಂಗಳೂರು<br>ತೋಟಗಾರಿಕೆ ಇಲಾಖೆ<br><br>ಸಂಪರ್ಕ:<br><br>ಡಾ: ಎಂ. ಜಗದೀಶ್,<br>ಜಂಟಿ ನಿರ್ದೇಶಕರು,<br>ತೋಟಗಾರಿಕಾ ಇಲಾಖೆ,<br><br>ಮೊಬೈಲ್ 94489 99209 | 14-1-2016<br>ಗುರುವಾರ<br>ಬೆಳಗ್ಗೆ<br>11-00 ಗಂಟೆಗೆ | ತೋಟಗಾರಿಕೆ ಮಾಹಿತಿ ಕೇಂದ್ರ,<br>ಲಾಲ್‌ಬಾಗ್,<br>ಬೆಂಗಳೂರು |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## 8 ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ ಪ್ರತಿನಿಧಿ ನೋಂದಣಿ ಕೇಂದ್ರಗಳು

ಬೆಂಗಳೂರು, ಜನವರಿ 13, (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರವು ಕರ್ನಾಟಕ ಚಲನಚಿತ್ರ ಅಕಾಡೆಮಿ ಮತ್ತು ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಶ್ರಯದಲ್ಲಿ ಜನವರಿ 28 ರಿಂದ ಫೆಬ್ರವರಿ 4 ರವರೆಗೆ ಬೆಂಗಳೂರು ಹಾಗೂ ಮೈಸೂರಿನಲ್ಲಿ ನಡೆಯಲಿದೆ. ಬೆಂಗಳೂರಿನಲ್ಲಿ ರಾಜಾಜಿನಗರದ ಓರಿಯನ್ ಮಾಲ್‌ನ 11 ಬೆಳ್ಳಿ ಪರದೆಗಳ ಮೇಲೆ ಚಿತ್ರೋತ್ಸವದ ಚಿತ್ರಗಳು ಮೂಡಿಬರಲಿದೆ. ಹಾಗೆಯೇ ಮೈಸೂರಿನ ಐನಾಕ್ಸ್ ಚಲನಚಿತ್ರಮಂದಿರದ 4 ಬೆಳ್ಳಿ ಪರದೆಗಳಲ್ಲಿ ಚಲನಚಿತ್ರ ಪ್ರದರ್ಶಿತಗೊಳ್ಳಲಿದೆ.

ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಪ್ರತಿನಿಧಿಗಳಾಗಿ ನೋಂದಣಿಗಾಗಿ ಬೆಂಗಳೂರಿನ ಚಿತ್ರ್ಯೋತ್ಸವ ಕಾರ್ಯಾಲಯ, ಕರ್ನಾಟಕ ಚಲನಚಿತ್ರ ಅಕಾಡೆಮಿ, ಬಾದಾಮಿ ಹೌಸ್, ಕಾರ್ಪೋರೇಷನ್ ಎದುರು, ಸುಚಿತ್ರ ಫಿಲಂ ಸೊಸೈಟಿ, ಬನಶಂಕರಿ ಬೆಂಗಳೂರು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ, ಕ್ರೆಸೆಂಟ್ ರಸ್ತೆ, ಶಿವಾನಂದ ವೃತ್ತದ ಸಮೀಪ, ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು ಮೈಸೂರಿನಲ್ಲಿ ವಾರ್ತಾ ಭವನ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಧನ್ವಂತರಿ ರಸ್ತೆ ಇಲ್ಲಿ ನೋಂದಣಿ ಘಟಕಗಳನ್ನು ತೆರೆಯಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಶ್ರೀ ಹೆಚ್.ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಈ ಚಲನಚಿತ್ರೋತ್ಸವದಲ್ಲಿ ಪ್ರತಿನಿಧಿಗಳಾಗಿ ಭಾಗವಹಿಸಲು ಇಚ್ಛಿಸುವ ಸಾರ್ವಜನಿಕರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಸಾರ್ವಜನಿಕರಿಗೆ 600 ರೂ. ಆಗಿದೆ. ಸಿನಿ ಕ್ಲಬ್, ಸಿನಿ ಸೊಸೈಟಿ ಸದಸ್ಯರು, ಚಿತ್ರ್ಯೋದ್ಯಮದವರು, ಹಿರಿಯ ನಾಗರೀಕರು ಮತ್ತು 18 ವರ್ಷ ಮೇಲ್ಪಟ್ಟ ವಿದ್ಯಾರ್ಥಿಗಳಿಗೆ 300 ರೂ.ಗಳ ಪ್ರವೇಶ ಶುಲ್ಕವನ್ನು ನಿಗದಿಪಡಿಸಲಾಗಿದೆ. ಚಲನಚಿತ್ರ್ಯೋತ್ಸವದಲ್ಲಿ ಪ್ರತಿನಿಧಿಗಳಾಗಿ ಹೆಸರು ನೋಂದಣಿ ಮಾಡಿದವರು ಬೆಂಗಳೂರು ಮತ್ತು ಮೈಸೂರು ನಗರಗಳ ಚಿತ್ರಮಂದಿರಗಳಲ್ಲಿ ಪ್ರತಿನಿಧಿ ಪಾಸ್ ತೋರಿಸಿ ಚಲನಚಿತ್ರ ವೀಕ್ಷಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ವೆಬ್‌ಸೈಟ್ ವಿಳಾಸ **www.biffes.in** ಅನ್ನು ಸಂಪರ್ಕಿಸಬಹುದೆಂದು ಶ್ರೀ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.

ಹೆಚ್‌ಬಿಡಿ/ಬಾಬು/ಕೆಎಂ

## ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ:

# ರಾಷ್ಟ್ರೀಯ ಯುವ ದಿನಾಚರಣೆ ಸಪ್ತಾಹದ ಕಾರ್ಯಕ್ರಮಗಳು

ಬೆಂಗಳೂರು, ಜನವರಿ 13, 2016 (ಕರ್ನಾಟಕ ವಾರ್ತೆ)

ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯ ಅಂಗವಾಗಿ ರಾಜ್ಯ ಸರ್ಕಾರವು ಆದೇಶದಲ್ಲಿ ತಿಳಿಸಿರುವ ರಾಷ್ಟ್ರೀಯ ಯುವ ದಿನಾಚರಣೆ ಸಪ್ತಾಹದ ಕಾರ್ಯಕ್ರಮಗಳ ಮಾರ್ಗಸೂಚಿಗಳು ಇಂತಿವೆ.

ಜನವರಿ 14 ಮತ್ತು 15 ರಂದು "ಸಾರ್ವತ್ರಿಕ ಸಾಕ್ಷರತೆಯಲ್ಲಿ ಯುವಜನತೆಯ ಪಾತ್ರದ " ಕುರಿತು ಭಾಷಣ ಸ್ಪರ್ಧೆ, ಏರ್ಪಡಿಸುವುದು. ಮತ್ತು ರಾಷ್ಟ್ರೀಯ ಮಹತ್ವದ ವಿಷಯಗಳ ಕುರಿತು ಯುವಕರಿಂದ ಕೌಶಲ್ಯಗಳ ಪ್ರದರ್ಶನ.

ಜನವರಿ 16 ರಂದು ರಾಷ್ಟ್ರೀಯ ಸೇವಾ ದಿನವಾಗಿ ವಿಶ್ವವಿದ್ಯಾನಿಲಯ ಹಾಗೂ ಕಾಲೇಜುಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂ ಸೇವಕರನ್ನು ಒಳಗೊಂಡ ಪರಿಸರ ಸಂರಕ್ಷಣೆ ಕುರಿತದ ವಿಶೇಷ ಕಾರ್ಯಕ್ರಮ ಏರ್ಪಡಿಸುವುದು. ಹಳ್ಳಿ ಮತ್ತು ನಗರಗಳ ಸ್ವಚ್ಛತೆ ಕುರಿತಾಗಿ ಸ್ವಯಂ ಪ್ರೇರಣೆ ಮೇಲೆ ಶ್ರಮದಾನ ಹಾಗೂ ವಿಶೇಷ ಘಟಕ ಕಾರ್ಯಕ್ರಮ. ನೇತ್ರದಾನ, ರಕ್ತದಾನ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳು, ನೀರಿನ ಕೊಳ, ರಸ್ತೆ ಕೆಲಸ ಕಾರ್ಯಗಳ ಸಂರಕ್ಷಣೆ ಬಗ್ಗೆ ಯುವಜನತೆಯನ್ನು ಬಳಸಿಕೊಳ್ಳುವ ಕಾರ್ಯಕ್ರಮ ಏರ್ಪಡಿಸುವುದು.

ಜನವರಿ 17 ರಂದು ದೈಹಿಕ ದೃಢತೆ ಅಂಗವಾಗಿ ಗ್ರಾಮೀಣ ಕ್ರೀಡೆ, ವಿಶೇಷ ಕ್ರೀಡೆಗೆ ಪ್ರೋತ್ಸಾಹ ನೀಡುವುದು. ಸಾಹಸ ಕ್ರೀಡೆಗಳಿಗೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

ಜನವರಿ 18 ರಂದು ಶಾಂತಿಗಾಗಿ ಯುವಜನತೆ ದಿನ ಆಚರಿಸಲು ದೇಶದಲ್ಲಿ ನೆಲೆಸಲು ಸಮಾವೇಶ ಹಾಗೂ ಚರ್ಚೆಗಳನ್ನು ಆಯೋಜಿಸುವುದು. ಕ್ರೀಡೆಗಳ ಆಯೋಜನೆ ಮಾಡುವುದು.

ಜನವರಿ 19 ರಂದು ಕೌಶಲ್ಯ ಅಭಿವೃದ್ಧಿ ನಿಮಿತ್ತ ಯುವಜನರು ತಯಾರಿಸಿದ ಕೌಶಲ್ಯ ಅಭಿವೃದ್ಧಿ ವಸ್ತುಗಳ ವಸ್ತು ಪ್ರದರ್ಶನ ಏರ್ಪಡಿಸುವುದು, ಹೊಸ ವಿಷಯಗಳ ತರಬೇತಿಯನ್ನು ಪ್ರಾರಂಭಿಸುವುದು, ಸರ್ಕಾರದ ಯುವ ಕಾರ್ಯಕ್ರಮಗಳ ವಿವರಗಳನ್ನು ಯುವಜನತೆಗೆ ತಲುಪಿಸುವುದು ಮತ್ತು ರಾಷ್ಟ್ರೀಯ ಯುವ ಸಪ್ತಾಹದ ಕ್ರೋಢಿಕರಣ ಮಾಡುವುದು.

ರಾಜ್ಯದ ಸರ್ಕಾರದ ಆದೇಶದಲ್ಲಿ ಮೇಲೆ ಕಾಣಿಸಿದ ಎಲ್ಲಾ ಕಾರ್ಯಕ್ರಮಗಳನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳು, ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪದವಿ ಕಾಲೇಜುಗಳು, ಇಂಜಿನಿಯರಿಂಗ್ ಕಾಲೇಜುಗಳು, ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಜನವರಿ 19 ರವರೆಗೆ "ರಾಷ್ಟ್ರೀಯ ಯುವ ದಿನಾಚರಣೆಯ ಸಪ್ತಾಹ" ವನ್ನಾಗಿ ಆಚರಿಸುವುದು.

ಮಾರ್ಗಸೂಚಿಗಳ ಅನುಸಾರ ವಿವೇಕಾನಂದರ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಪ್ರತಿ ವರ್ಷ ತಪ್ಪದೇ ಕಡ್ಡಾಯವಾಗಿ ಆಚರಿಸಲು ಸರ್ಕಾರ ಆದೇಶ ಹೊರಡಿಸಿದೆ.

ಬಾಬು/ಕೆಎಂ

## ವೃತ್ತಿ ಪರೀಕ್ಷೆ ಫಲಿತಾಂಶ ಪ್ರಕಟ

ಬೆಂಗಳೂರು, ಜನವರಿ 13, 2016 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಶಿಶಿಕ್ಷು ತರಬೇತಿ ಯೋಜನೆಯಡಿಯಲ್ಲಿ ಅಕ್ಟೋಬರ್ 2015 ರಲ್ಲಿ ರಾಜ್ಯದ 17 ಪರೀಕ್ಷಾ ಕೇಂದ್ರಗಳಲ್ಲಿ ನಡೆದ ಅಖಿಲ ಭಾರತ ವೃತ್ತಿ ಪರೀಕ್ಷೆ(ಶಿಶಿಕ್ಷು)ಯ ಫಲಿತಾಂವನ್ನು ಸಂಬಂಧಪಟ್ಟ ಪರೀಕ್ಷಾ ಕೇಂದ್ರಗಳಲ್ಲಿ ಹಾಗೂ ವಿಭಾಗೀಯ ಕಚೇರಿಗಳಲ್ಲಿ ಪ್ರಕಟಿಸಲಾಗಿದೆ. ಅಂಕಪಟ್ಟಿಗಳನ್ನು ಪಡೆಯಲು ದಿನಾಂಕ: 30-01-2016 ರ ನಂತರ ಆಯಾ ಪರೀಕ್ಷಾ ಕೇಂದ್ರಗಳ ಪ್ರಾಚಾರ್ಯರನ್ನು ಸಂಪರ್ಕಿಸಬಹುದು. ದಿನಾಂಕ: 12-01-2016 ರಂದು ಬೆಳಿಗ್ಗೆ 11-00 ಗಂಟೆಗೆ ಫಲಿತಾಂಶವು ಇಂಟರ್‌ನೆಟ್‌ನಲ್ಲೂ ಸಹ ಲಭ್ಯವಿರುತ್ತದೆ. www.emptrg.kar.nic.in.

ಬಾಬು/ಕೆಎಂ

## Trade test Results

**Bangalore, January 13 (Karnataka Information)**

**The result of the All India Trade Test under ATS held during October 2015 already announced in the Trade Test Centres and Divisional Office. The Apprecentices may contact the Principals of the concerned centre's to collect the marks cards after 30-1-2016. The results are also available over the Internet at www.emptrg.kar.nic.in of 12-01-2016 at 11.00 A.M.**

**babu/km**

## ಆಡಳಿತದಲ್ಲಿ ಕನ್ನಡ ಅರ್ಥಪೂರ್ಣ ಅನುಷ್ಠಾನಕ್ಕೆ ಸೂಚನೆ

ಬೆಂಗಳೂರು, ಜನವರಿ 13, 2016 (ಕರ್ನಾಟಕ ವಾರ್ತೆ)

ಆಡಳಿತದಲ್ಲಿ ಕನ್ನಡ ಪರಿಣಾಮಕಾರಿಯಾಗಿ ಹಾಗೂ ಅರ್ಥಪೂರ್ಣವಾಗಿ ಅನುಷ್ಠಾನಗೊಳಿಸುವ ಗುರುತರ ಜವಾಬ್ದಾರಿ ಹಾಗು ಹೊಣೆಗಾರಿಕೆ ಇಲಾಖೆಯ ಮುಖ್ಯಸ್ಥರದ್ದಾಗಿರುತ್ತದೆ. ಮೇಲಂತದ ಅಧಿಕಾರಿಯಿಂದ ಕೆಳ ಹಂತದ ಅಧಿಕಾರಿವರೆಗೂ ಆಡಳಿತದ ಎಲ್ಲಾ ಹಂತದಲ್ಲೂ ಕಛೇರಿಯ ಟಿಪ್ಪಣಿಯಿಂದಿಡಿದು ನೋಂದಣಿ, ದೃಢೀಕರಣ ಪತ್ರಗಳು, ಅರ್ಜಿ ನಮೂನೆಗಳು ಸಂಪೂರ್ಣವಾಗಿ ಕನ್ನಡದಲ್ಲಿರುವಂತೆ ನೋಡಿಕೊಳ್ಳುವ ಅಗತ್ಯವಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಎಲ್. ಹನುಮಂತಯ್ಯ ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಟ್ಟರು.

ಅವರು ಇಂದು ವಾಣಿಜ್ಯ ತೆರಿಗೆ ಇಲಾಖೆಯ ಕಛೇರಿಗೆ ಭೇಟಿ ನೀಡಿ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಾಣಿಜ್ಯ ತೆರಿಗೆ ಇಲಾಖೆ ನೀಡುವ ನೋಂದಣಿ ಪತ್ರಗಳನ್ನು ಕಡ್ಡಾಯವಾಗಿ ಸಂಪೂರ್ಣವಾಗಿ ಕನ್ನಡದಲ್ಲಿ ಪೂರೈಸಬೇಕಲ್ಲದೇ, ನವೀಕರಣ ಸಂದರ್ಭದಲ್ಲಿ ನಾಮಫಲಕಗಳು ಕನ್ನಡದಲ್ಲಿವಿಯೇ ಎನ್ನುವುದನ್ನು ಪರಿಶೀಲಿಸಿದ ನಂತರವೇ ನೋಂದಣಿ ಪತ್ರ ನೀಡುವುದರಿಂದ ಕನ್ನಡ ಕಲಿಯುವುದು ಅನಿವಾರ್ಯವಾಗುತ್ತದೆ ಇದರಿಂದ ಕನ್ನಡ ಬೆಳವಣಿಗೆಯನ್ನು ಪ್ರೋತ್ಸಾಹಿಸಿದಂತಾಗುತ್ತದೆ ಎಂದ ಡಾ. ಎಲ್. ಹನುಮಂತಯ್ಯ  ವಾಣಿಜ್ಯ ತೆರಿಗೆ ಇಲಾಖೆಗಳ ಅಧಿಕಾರಿಗಳಿಗೆ ನೀಡುವ ತರಬೇತಿ ಆಂಗ್ಲ ಭಾಷೆಯಲ್ಲಿ ನಡೆಯುತ್ತಿದೆ ಎನ್ನುವ ದೂರು ವ್ಯಾಪಕವಾಗಿದ್ದು, ಈ ಅಧಿಕಾರಿಗಳು ಈ ನಾಡಿನ ಜನಸಾಮಾನ್ಯರೊಡನೆ ಕೆಲಸ ಮಾಡಬೇಕಾಗಿರುವುದರಿಂದ ಇವರಿಗೆ ಕನ್ನಡದಲ್ಲಿಯೇ ತರಬೇತಿ ನೀಡುವ ಜೊತೆಗೆ ಕನ್ನಡ ಕಲಿಸುವ ಕೆಲಸವೂ ಆಗಬೇಕಾಗಿದೆ ಎಂದರು.

ವಾಣಿಜ್ಯ ತೆರಿಗೆ ಇಲಾಖೆಗಳ ಜಾಲತಾಣದಲ್ಲಿ ಕನ್ನಡವನ್ನು ಪ್ರಧಾನ ಭಾಷೆಯನ್ನಾಗಿ ಆಂಗ್ಲ ಭಾಷೆಯನ್ನು ಆಯ್ಕೆ ಭಾಷೆಯನ್ನಾಗಿ ಅಳವಡಿಸದಿರುವುದು ಕಂಡುಬಂದಿದೆ. ಇದು ಕನ್ನಡ ಭಾಷೆಯ ಬೆಳವಣಿಗೆಗೆ ಮಾರಕವಾಗಲಿದೆ. ಮುಂಬರುವ ದಿನಗಳಲ್ಲಿ ಜಾಲತಾಣದಲ್ಲಿ ಕನ್ನಡ ಭಾಷೆಯನ್ನು ಪ್ರಧಾನವಾಗಿರುವಂತೆ ಅಳವಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ತನಿಕಾ ವರದಿಗಳು, ಲೆಕ್ಕಪರಿಶೋಧನಾ ವರದಿಗಳು ಕೂಡ ಕನ್ನಡದಲ್ಲಿರುವಂತೆ ನೋಡಿಕೊಳ್ಳುವ ಜವಾಬ್ದಾರಿ ಅಧಿಕಾರಿಗಳಾದ್ದಾಗಿದೆ ಎಂದರು. ಇಲಾಖೆಯಲ್ಲಿ ಕನ್ನಡ ಅನುಷ್ಠಾನ ಸಮಿತಿ ಕಾರ್ಯನಿರ್ವಹಿಸುತ್ತಿದ್ದು, ಕಾರ್ಯ ವ್ಯಾಪ್ತಿಯ ಮಾಹಿತಿಯನ್ನು ನೀಡುವಂತೆ ತಿಳಿಸಿದರಲ್ಲದೆ, ಹೊರಗುತ್ತಿಗೆ ನೌಕರರನ್ನು ನೇಮಕ ಮಾಡಿಕೊಳ್ಳುವ ಸಂದರ್ಭದಲ್ಲಿ ಕನ್ನಡ ಭಾಷೆ ಬಲ್ಲವರನ್ನು ನೇಮಕ ಮಾಡಿಕೊಳ್ಳುವಂತೆ ಸೂಚಿಸಿದರು.

ಎಲ್ಲಾ ಕಡತಗಳಲ್ಲಿನ ಟಿಪ್ಪಣಿಗಳು ಸಂಪೂರ್ಣವಾಗಿ ಆಂಗ್ಲ ಭಾಷೆಯಲ್ಲಿರುವ ಬಗ್ಗೆ ದೂರು ಬಂದಿದ್ದು, ಈ ಸಂಬಂಧ ಕಡತಗಳನ್ನು ಪರಿಶೀಲನೆಗೆ ಒಪ್ಪಿಸಬೇಕು ಹಾಗೂ ಕೂಡಲೇ ಬದಲಾವಣೆ ತರುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ವಾಣಿಜ್ಯ ತೆರಿಗೆ ಇಲಾಖೆಗಳ ಆಯುಕ್ತರಾದ ರಿತ್ವಿಕ್ ಪಾಂಡೆ ಮಾತನಾಡಿ ಜಾಲತಾಣದಲ್ಲಿ ಕನ್ನಡವನ್ನು ಪ್ರಧಾನ ಭಾಷೆಯನ್ನಾಗಿ ಬಳಸಲು ತಕ್ಷಣ ಕ್ರಮ ಕೈಗೊಳ್ಳುವ ಭರವಸೆ ನೀಡಿದರಲ್ಲದೆ ಇಲಾಖೆಯ ಆಡಳಿತದ ಎಲ್ಲಾ ಹಂತಗಳಲ್ಲೂ ಬಹುತೇಕ ಕನ್ನಡದಲ್ಲಿಯೇ ವ್ಯವಹಿರಿಸಲಾಗುತ್ತಿದೆ ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಆಂಗ್ಲಭಾಷೆಯನ್ನು ಬಳಸಲಾಗುತ್ತಿದೆ. ಇನ್ನೂ ಹೆಚ್ಚು

ಪರಿಣಾಮಕಾರಿಯಾಗಿ ಆಡಳಿತದಲ್ಲಿ ಕನ್ನಡ ಬಳಕೆ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದು ಎಂದರು.

ಇದೆ ಸಂದರ್ಭದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಎಲ್. ಹನುಮಂತಯ್ಯರವರನ್ನು ಇಲಾಖೆಯ ಅಧಿಕಾರಿಗಳ ಸಂಘ, ಕನ್ನಡ ಸಂಘ ಹಾಗೂ ಡಿ–ಗ್ರೂಪ್ ನೌಕರರ ಸಂಘಗಳಿಂದ ಸನ್ಮಾನಿಸಲಾಯಿತು.

ಸಭೆಯಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ಸಿದ್ಧಯ್ಯ, ಕೈಗಾರಿಕಾ ಕನ್ನಡ ಸಂಘದ ಪ್ರಧಾನ ಕಾರ್ಯದರ್ಶಿ ಶ್ರೀಧರ್, ಗಣಕ ಪರಿಷತ್ತಿನ ಕಾರ್ಯದರ್ಶಿ ಜಿ. ಎನ್ ನರಸಿಂಹಮೂರ್ತಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಕೆ. ಮುರಳಿಧರ, ವಾಣಿಜ್ಯ ತೆರಿಗೆ ಇಲಾಖೆಗಳ ಅಪರ ಆಯುಕ್ತರುಗಳಾದ ಸಯೀರ್ ಅಹಮದ್ ಖಾನ್, ಹೇಮಂತ್ ಕುಮಾರ್, ಜಗದೀಶ್ ಪ್ರಸಾದ್, ಪರಮೇಶ್ವರಯ್ಯ, ಸಿದ್ಧಪ್ಪ, ಶಂಶುದ್ದೀನ್ ಅಡೂರ್, ಲಕ್ಷ್ಮೀನಾರಾಯಣ, ಬಿ. ವಿ. ರವಿ, ಶಿವಕುಮಾರ್ ವೈ. ಸಿ. ಭಾಗವಹಿಸಿದ್ದರು.

ವಾಣಿಜ್ಯ ತೆರಿಗೆ ಇಲಾಖೆಗಳ ಜಂಟಿ ಆಯುಕ್ತರಾದ (ಮಾನವ ಸಂಪನ್ಮೂಲ ಅಭಿವೃದ್ಧಿ) ಕೆ. ರಾಮನ್‌ರವರು ಸ್ವಾಗತತಿಸಿ, ವಂದಿಸಿದರು.
ಬಾಬು/ಕೆಎಂ

## ಕನ್ನಡ ಸಾಹಿತ್ಯ ಪರಿಷತ್ ಚುನಾವಣೆ 2016
## ಅಂತಿಮ ಮತದಾರರ ಪಟ್ಟಿ ಪ್ರಕಟ

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

**ಕನ್ನಡ ಸಾಹಿತ್ಯ ಪರಿಷತ್ತಿನ 25ನೇ ಅಧ್ಯಕ್ಷರ/ಕಾರ್ಯಕಾರಿ ಸಮಿತಿ ಸದಸ್ಯರ ಚುನಾವಣೆಗೆ ಸಂಬಂಧಿಸಿದಂತೆ ಅಂತಿಮ ಮತದಾರರ ಪಟ್ಟಿಯನ್ನು 11–1–2016 ರಂದು ಕೇಂದ್ರ ಕಛೇರಿಯಲ್ಲಿ ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ತಾಲ್ಲೂಕು ಕಛೇರಿಗಳಲ್ಲಿ ಪ್ರಚುರಪಡಿಸಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಕೇಂದ್ರ ಚುನಾವಣಾಧಿಕಾರಿಗಳಾದ ಕೆ.ನಾಗರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ಮತದಾರರ ಪಟ್ಟಿಯ ಬಗ್ಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದ್ದು, ಅದರಂತೆ ಕೇಂದ್ರ ಚುನಾವಣಾಧಿಕಾರಿಗಳ ಕಛೇರಿಯಲ್ಲಿ ಬೆಂಗಳೂರು ವಿಭಾಗ 623, ಮೈಸೂರು ವಿಭಾಗ 194, ಬೆಳಗಾವಿ ವಿಭಾಗ 45 ಹಾಗೂ ಕಲಬುರ್ಗಿ ವಿಭಾಗ 174 ರಂತೆ ಒಟ್ಟು 1036 ಆಕ್ಷೇಪಣೆಗಳನ್ನು ಸ್ವೀಕರಿಸಲಾಗಿದ್ದು, ಸ್ವೀಕೃತವಾದ ಎಲ್ಲಾ ಅರ್ಹ ಆಕ್ಷೇಪಣೆಗಳನ್ನು ಅಳವಡಿಸಿಕೊಂಡು ಅಂತಿಮ ಮತದಾರರ ಪಟ್ಟಿಯನ್ನು ತಯಾರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.**

**ಸದರಿ ಮತದಾರರ ಪಟ್ಟಿಯನ್ನು ಸಿ.ಡಿ. ಮೂಲಕ ಕನ್ನಡ ಸಾಹಿತ್ಯ ಪರಿಷತ್ತಿನ ಕೇಂದ್ರ ಚುನಾವಣಾಧಿಕಾರಿಗಳ ಕಛೇರಿಯಿಂದ ಅಥವಾ ಜಿಲ್ಲಾ ಕೇಂದ್ರ ತಾಲ್ಲೂಕು ತಹಸೀಲ್ದಾರರ ಕಛೇರಿಯಿಂದ ನಿಗದಿಪಡಿಸುವ ಬೆಲೆಗೆ ಪಡೆಯಬಹುದಾಗಿರುತ್ತದೆ.**

**ಅಂತಿಮ ಮತದಾರರ ಪಟ್ಟಿಯಂತೆ ಒಟ್ಟು 1,89,353 ಮತದಾರರು ಇದ್ದು, ರಾಜ್ಯದ ತಾಲ್ಲೂಕು ಕೇಂದ್ರಗಳಲ್ಲಿ ಮತ್ತು 150ಕ್ಕೂ ಹೆಚ್ಚು ಮತದಾರರನ್ನು ಹೊಂದಿರುವ ಹೋಬಳಿ ಕೇಂದ್ರಗಳು ಸೇರಿ ಒಟ್ಟು 293 ಮತಗಟ್ಟೆಗಳನ್ನು ಮತದಾರರ ಅನುಕೂಲಕ್ಕಾಗಿ ಸ್ಥಾಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.**

**ಚುನಾವಣೆಯನ್ನು ಶಾಂತಿಯುತವಾಗಿ, ಪಾರದರ್ಶಕವಾಗಿ, ನಿಷ್ಪಕ್ಷಪಾತವಾಗಿ ಕಾನೂನು ರೀತ್ಯ ನಡೆಸಲು ಪರಿಷತ್ತಿನ ಸದಸ್ಯರು ಹಾಗೂ ಸಾರ್ವಜನಿಕರು ಸಹಕರಿಸುವಂತೆ ಕೇಂದ್ರ ಚುನಾವಣಾಧಿಕಾರಿಗಳು ಕೋರಿದ್ದಾರೆ.**

ಬಾಬು/ಕೆಎಂ